ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	876
ಮಾನ್ಯ ಸದಸ್ಯರ ಹೆಸರು	ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ	20.09.2021
ಉತ್ತರಿಸುವ ಸಚಿವರು	ಉನ್ನತ ಶಿಕ್ಷಣ, ಐಟಿ&ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರು

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ಸರ್ಕಾರಿ ಹಾಗೂ ಅನುದಾನಿತ ಇಂಜಿನೀಯರಿಂಗ್ ಮತ್ತು ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಸಹಾಯಕ ಪ್ರಾಧ್ಯಾಪಕರಾಗಿ 10 ವರ್ಷಗಳ ಹಿಂದೆ ನೇಮಕಗೊಂಡಿರುವವರಿಗೆ ಶೈಕ್ಷಣಿಕ ವಿದ್ಯಾರ್ಹತೆ ಹೊಂದಿದ್ದರೂ, ಸಿ.ಎ.ಎಸ್ ಅಡಿಯಲ್ಲಿ (ಕೆರಿಯರ್ ಅಡ್ವಾನ್ಸ್‌ಮೆಂಟ್ ಸ್ಕೀಮ್) ಸ್ಥಾನಪನ್ನ ಬಡ್ತಿಯನ್ನು ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	-ಹೌದು-
ಆ)	ಕಾಲಕಾಲಕ್ಕೆ ಸ್ಥಾನಪನ್ನ ಬಡ್ತಿಯನ್ನು ನೀಡದಿರಲು ಸರ್ಕಾರಕ್ಕಿರುವ ತೊಂದರೆಗಳೇನು; (ವಿವರ ನೀಡುವುದು)	ಸರ್ಕಾರಿ ಇಂಜಿನೀಯರಿಂಗ್ ಕಾಲೇಜುಗಳಿಗೆ ಕರ್ನಾಟಕ ಲೋಕಾಸೇವಾ ಆಯೋಗದಿಂದ 2010ರಲ್ಲಿ ನೇಮಕ ಹೊಂದಿದ ಸಹಾಯಕ ಪ್ರಾಧ್ಯಾಪಕರುಗಳಿಗೆ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 96 ಡಿಟಿಇ 2010, ದಿನಾಂಕ:07.03.2011ರನ್ವಯ ಎಐಸಿಟಿಇಯ 6ನೇ ವೇತನ ಶ್ರೇಣಿಯನ್ನು ವಿಸ್ತರಿಸಲಾಗಿರುತ್ತದೆ. ಅದರಂತೆ ಸಹಾಯಕ ಪ್ರಾಧ್ಯಾಪಕರುಗಳನ್ನು ಸಹ ಪ್ರಾಧ್ಯಾಪಕರೆಂದು ಪದನಾಮೀಕರಿಸುವ ವಿಷಯಕ್ಕೆ ಸಂಬಂಧಿಸಿದಂತೆ ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ ಮತ್ತು ಮಾನ್ಯ ಸರ್ವೋಚ್ಚ ನ್ಯಾಯಾಲಯಗಳಲ್ಲಿ ದಾವೆಗಳು

		ದಾಖಲಾಗಿದ್ದುದರಿಂದ, ಸಹಾಯಕ ಪ್ರಾಧ್ಯಾಪಕರುಗಳನ್ನು ಸಹ ಪ್ರಾಧ್ಯಾಪಕರೆಂದು ಪದೋನ್ನತಿಕರಿಸುವ ವಿಷಯವು ವಿಳಂಬವಾಗಿರುತ್ತದೆ. ಸರ್ಕಾರದ ಆದೇಶ ಸಂಖ್ಯೆ:ಇಡಿ 96 ಡಿಟಿಇ 2010, ದಿನಾಂಕ:07.03.2011ರಲ್ಲಿ Appendix–II(a)(xii)ರನ್ವಯ ರೆಗ್ಯೂಲೇಷನ್ 2012ರ ಪ್ಯಾರ 3.8 ಹಾಗೂ Table–IIIರ ಕ್ರಮಾಂಕ 03ರಲ್ಲಿ ನಮೂದಿಸಿರುವ ಅರ್ಹತೆ/ಸೇವಾ ಷರತ್ತುಗಳು ಹಾಗೂ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯ (CAS) ಸೌಲಭ್ಯ ಮತ್ತು ಇತರೆ ಸೇವಾ ಸೌಲಭ್ಯಗಳ ಕುರಿತಂತೆ ಕಾಲಕಾಲಕ್ಕೆ ಎ.ಐ.ಸಿ.ಟಿ.ಇಯು ಹೊರಡಿಸಿರುವ ಆದೇಶ/ನಿಯಮ/ತಿದ್ದುಪಡಿ/ಸ್ಪಷ್ಟೀಕರಣಗಳನ್ವಯ ಹಾಗೂ ಎ.ಐ.ಸಿ.ಟಿ.ಇಯ ನಿಯಮಾವಳಿಗಳ ಪ್ರಕಾರ ಎ.ಪಿ.ಐ ಅಂಕಗಳ ಪರಿಗಣನೆ ಮತ್ತು ಇತರೆ ಅರ್ಹತಾ ಮಾನದಂಡಗಳನ್ನು ಕಡ್ಡಾಯವಾಗಿ ಪರಿಗಣಿಸಿ, ಸಹಾಯಕ ಪ್ರಾಧ್ಯಾಪಕರುಗಳನ್ನು ಸಹ ಪ್ರಾಧ್ಯಾಪಕರೆಂದು ಪದನಾಮೀಕರಿಸುವ ಹಾಗೂ ವೇತನ ನಿಗದಿಗೊಳಿಸುವ ಬಗ್ಗೆ ತಜ್ಞರ ಸಮಿತಿ ರಚಿಸಿ ಸರ್ಕಾರಕ್ಕೆ ಸೂಕ್ತ ಪ್ರಸ್ತಾವನೆ ಸಲ್ಲಿಸುವಂತೆ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಇವರಿಗೆ ದಿನಾಂಕ:16.07.2021ರ ಪತ್ರದಲ್ಲಿ ಕೋರಲಾಗಿತ್ತು. ಅದರಂತೆ, ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಇವರು ಸರ್ಕಾರಿ ಇಂಜಿನೀಯರಿಂಗ್ ಕಾಲೇಜುಗಳಲ್ಲಿನ ಬೋಧಕ ವೃಂದದವರಿಗೆ "ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯಡಿ" ಸಹಾಯಕ ಪ್ರಾಧ್ಯಾಪಕರುಗಳನ್ನು ಸಹ ಪ್ರಾಧ್ಯಾಪಕರೆಂದು ಪದನಾಮೀಕರಿಸುವ ಹಾಗೂ ವೇತನ ನಿಗದಿಗೊಳಿಸುವ ಕುರಿತು ಸ್ಥಾನೀಕರಣ ಸಮಿತಿ ರಚಿಸುವ ಬಗ್ಗೆ ದಿನಾಂಕ:13.09.2021ರಂದು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿದ್ದು, ಪರಿಶೀಲನೆಯಲ್ಲಿರುತ್ತದೆ. ಅನುದಾನಿತ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅರ್ಹ ಉಪನ್ಯಾಸಕರುಗಳಿಗೆ ಕೆರಿಯರ್ ಅಡ್ವಾನ್ಸ್ ಮೆಂಟ್ ಸ್ಕೀಮ್ ಸೌಲಭ್ಯಗಳನ್ನು ನೀಡಬೇಕಾಗಿರುತ್ತದೆ. ಆದರೆ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ: 8484/2020 (S–RES) ಸಂಬಂಧಿಸಿದಂತೆ ಮಾನ್ಯ ನ್ಯಾಯಾಲಯವು

		ದಿನಾಂಕ:04.12.2020ರಂದು ನೀಡಿರುವ ಮಧ್ಯಂತರ ಆದೇಶದಲ್ಲಿ ಪಾಲಿಟೆಕ್ನಿಕ್ ಬೋಧಕ ಸಿಬ್ಬಂದಿಗಳಿಗೆ ಸಿಎಎಸ್ ಅಡಿಯಲ್ಲಿ ಸೌಲಭ್ಯಗಳನ್ನು ಮಂಜೂರು ಮಾಡಲು ನಿಯಮಗಳನ್ನು ರೂಪಿಸಿರುವ 2012ರ ಎಐಸಿಟಿಇ ಸಿಎಎಸ್ ರೆಗ್ಯುಲೇಷನ್‌ನ್ನು ಅನುಷ್ಠಾನಗೊಳಿಸಿದ ಸರ್ಕಾರದ ಆದೇಶ ಸಂಖ್ಯೆ: ಇಡಿ 167 ಡಿಟಿಇ 2017, ದಿನಾಂಕ:10.11.2020ಕ್ಕೆ ತಡೆಯಾಜ್ಞೆ ನೀಡಲಾಗಿದೆ. ಮಾನ್ಯ ನ್ಯಾಯಾಲಯದಿಂದ ಅಂತಿಮ ತೀರ್ಪು ಬಂದ ನಂತರ ಸಿಎಎಸ್ ಅಡಿಯಲ್ಲಿ ಸೌಲಭ್ಯಗಳನ್ನು ಮಂಜೂರು ಮಾಡಲು ಕ್ರಮ ಕೈಗೊಳ್ಳಲಾಗುವುದು.
ಇ)	ಸದರಿ ಸ್ಥಾನಪನ್ನ ಬಡ್ತಿಯನ್ನು ಯಾವ ಕಾಲಮಿತಿಯೊಳಗೆ ನೀಡಲಾಗುವುದು?	ನಿಯಮಾನುಸಾರ ಆದಷ್ಟು ಬೇಗ ಕ್ರಮಕೈಗೊಳ್ಳಲಾಗುವುದು

ಇಡಿ 198 ಟಿಇಸಿ 2021

(ಡಾ॥ ಅಶ್ವಥ್ ನಾರಾಯಣ ಸಿ.ಎನ್.)
ಉನ್ನತ ಶಿಕ್ಷಣ, ಐಟಿ&ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ,
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ
ಇಲಾಖೆ ಸಚಿವರು